## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಬಾಗಲಕೋಟೆ ಜಿಲ್ಲೆಯ ಬಾದಾಮಿ ಮತ್ತು ಬೀಳಗಿ ಮತಕ್ಷೇತ್ರದಲ್ಲಿನ 16,000 ಹೆಕ್ಟೇರ್ ನೀರಾವರಿ ವಂಚಿತ ಪ್ರದೇಶಕ್ಕೆ ಆಲಮಟ್ಟಿ ಜಲಾಶಯದ ಹಿನ್ನೀರಿನಿಂದ ನೀರನ್ನು ಎತ್ತಿ ನೀರಾವರಿಗೊಳಪಡಿಸುವ ಕೆರೂರ್ ಏತ ನೀರಾವರಿ ಯೋಜನೆಗೆ ಆಡಳಿತಾತ್ಮಕ ಅನುಮೋದನೆ ನೀಡುವ ಕುರಿತು.

***

**ಓದಲಾಗಿದೆ:-**
1. ವ್ಯವಸ್ಥಾಪಕ ನಿರ್ದೇಶಕರು, ಕೃಷ್ಣಾ ಭಾಗ್ಯ ಜಲ ನಿಗಮ ನಿಯಮಿತ ಇವರ ಪತ್ರ ಸಂಖ್ಯೆ: ಕೃಭಾಜನಿನಿ:ತಾಂತ್ರಿಕ ಶಾಖೆ-2:2018-19/3167 ದಿ:14/11/2018.
2. ವ್ಯವಸ್ಥಾಪಕ ನಿರ್ದೇಶಕರು, ಕೃಷ್ಣಾ ಭಾಗ್ಯ ಜಲ ನಿಗಮ ನಿಯಮಿತ ಇವರ ಪತ್ರ ಸಂಖ್ಯೆ:ಕೃಭಾಜನಿನಿ:ತಾಂತ್ರಿಕ ಶಾಖೆ-2:2019-20/1359 ದಿ:17/07/2019.

**ಪ್ರಸ್ತಾವನೆ:**

ಮೇಲೆ ಓದಲಾದ (1) ರ ಪತ್ರದಲ್ಲಿ ವ್ಯವಸ್ಥಾಪಕ ನಿರ್ದೇಶಕರು, ಕೃಷ್ಣಾ ಭಾಗ್ಯ ಜಲ ನಿಗಮ ನಿಯಮಿತ ರವರು ಕೃಷ್ಣಾ ಮೇಲ್ದಂಡೆ ಯೋಜನೆ ಹಂತ-3 ರಡಿ ಹೆರಕಲ್ ಏತ ನೀರಾವರಿ ಉಪ ಯೋಜನೆಯಡಿ ಬಾಗಲಕೋಟೆ ಜಿಲ್ಲೆಯ ಬೀಳಗಿ ತಾಲ್ಲೂಕಿನ 12,100 ಹೆಕ್ಟೇರ್ ಪ್ರದೇಶ ನೀರಾವರಿ ಸೌಲಭ್ಯಕ್ಕೆ ಒಳಪಡಿಸಲಾಗುತ್ತಿದ್ದು, ಮಲಪ್ರಭಾ ಎಡದಂಡೆ ಕಾಲುವೆ ಹಾಗೂ ಘಟಪ್ರಭಾ ಬಲದಂಡೆ ಕಾಲುವೆಯ ಮಧ್ಯಭಾಗದಲ್ಲಿಯ ಎತ್ತರ ಪ್ರದೇಶದಲ್ಲಿರುವ ಬಾದಾಮಿ ತಾಲ್ಲೂಕಿನ ಅಚ್ಚುಕಟ್ಟು ಕ್ಷೇತ್ರ ಒಳಗೊಂಡಂತೆ ಒಟ್ಟು 16,000 ಹೆಕ್ಟೇರ್ ಅಚ್ಚುಕಟ್ಟು ಪ್ರದೇಶಕ್ಕೆ ನೀರಾವರಿ ಸೌಲಭ್ಯ ಕಲ್ಪಿಸಲು ಕೆರೂರ್ ಏತ ನೀರಾವರಿ ಯೋಜನೆಯ ಅನುಷ್ಠಾನ ಕುರಿತು ವ್ಯವಸ್ಥಾಪಕ ನಿರ್ದೇಶಕರು, ಕೃಷ್ಣಾ ಭಾಗ್ಯ ಜಲ ನಿಗಮ ನಿಯಮಿತ ರವರು ವರದಿ ಸಲ್ಲಿಸಿರುತ್ತಾರೆ.

ಮೇಲೆ ಓದಲಾದ (2)ರ ಪತ್ರದಲ್ಲಿ ಆಲಮಟ್ಟಿ ಅಣೆಕಟ್ಟೆಯ ಹಿನ್ನೀರಿನಿಂದ ಹೆರಕಲ್ ಗ್ರಾಮದ ಬಳಿ ಆರ್.ಎಲ್.506.26 ಮೀ. ನಿಂದ ಆರ್.ಎಲ್.645.00 ಮೀ. ಎತ್ತರಕ್ಕೆ ನೀರನ್ನು ಲಿಫ್ಟ್ ಮಾಡಿ ಪೈಪ್ ಲೈನ್ ಜಾಲದ ಅಳವಡಿಕೆ ಮುಖಾಂತರ 2.00 ಟಿ.ಎಂ.ಸಿ ನೀರಿನ ಬಳಕೆಯೊಂದಿಗೆ ಬಾದಾಮಿ ಮತ್ತು ಬೀಳಗಿ ಮತಕ್ಷೇತ್ರ ಒಳಗೊಂಡಂತೆ ಒಟ್ಟು 16,000 ಹೆಕ್ಟೇರ್ ಅಚ್ಚುಕಟ್ಟು ಕ್ಷೇತ್ರಕ್ಕೆ ನೀರಾವರಿ ಸೌಲಭ್ಯ ಕಲ್ಪಿಸಲು ಕೆರೂರು ಏತ ನೀರಾವರಿ ಯೋಜನೆಯನ್ನು ರೂಪಿಸಲಾಗಿದೆ ಎಂದು ವರದಿ ಮಾಡಿರುತ್ತಾರೆ.

2019-20ನೇ ಸಾಲಿನ ಆಯವ್ಯಯ ಭಾಷಣದಲ್ಲಿ ರೂ.300 ಕೋಟಿ ವೆಚ್ಚದಲ್ಲಿ ಬಾದಾಮಿ ತಾಲ್ಲೂಕಿನಲ್ಲಿ 16,000 ಹೆ. ಪ್ರದೇಶಕ್ಕೆ ನೀರಾವರಿ ಸೌಲಭ್ಯ ಕಲ್ಪಿಸುವ ಕೆರೂರು ಏತ ನೀರಾವರಿ ಯೋಜನೆಯನ್ನು ಕೈಗೆತ್ತಿಕೊಳ್ಳಲು ಉದ್ದೇಶಿಸಿದೆ ಎಂದು ಘೋಷಿಸಲಾಗಿರುತ್ತದೆ.

ಯೋಜನೆಯ ಪ್ರಸ್ತಾವನೆಯನ್ನು ದಿನಾಂಕ:09/07/2019 ರಂದು ಜರುಗಿದ 121ನೇ ಕೃಷ್ಣಾ ಭಾಗ್ಯ ಜಲ ನಿಗಮದ ನಿರ್ದೇಶಕರ ಮಂಡಳಿಯ ಸಭೆಯ ಮುಂದೆ ಮಂಡಿಸಲಾಗಿದ್ದು, ನಿರ್ದೇಶಕರ ಮಂಡಳಿಯು ಈ ಕೆಳಗಿನಂತೆ ನಿರ್ದೇಶನ ನೀಡಿರುತ್ತದೆ :

"1. *2019-20ನೇ ಸಾಲಿನ ಆಯವ್ಯಯ ಬಾಷಣದಲ್ಲಿ ಘೋಷಿಸಲಾದಂತೆ ಬಾಗಲಕೋಟೆ ಜಿಲ್ಲೆಯ ಬಾದಾಮಿ ಮತ್ತು ಬೀಳಗಿ ಮತಕ್ಷೇತ್ರದಲ್ಲಿನ ಬಿಟ್ಟು ಹೋಗಿರುವ 16,000 ಹೆಕ್ಟೇರ್ ಪ್ರದೇಶಕ್ಕೆ ನೀರಾವರಿ ಸೌಲಭ್ಯ ಒದಗಿಸಲು, ಆಲಮಟ್ಟಿ ಹಿನ್ನೀರಿನಿಂದ ನೀರನ್ನು ಎತ್ತಿ ಕೆರೂರು ಏತ ನೀರಾವರಿ ಯೋಜನೆಗೆ ನೀರಾವರಿ ಕಲ್ಪಿಸಲು ರೂ.525.00 ಕೋಟಿಗಳ (2017-18 ನೇ ಸಾಲಿನ ದರಪಟ್ಟಿಯನ್ವಯ) ಅಂದಾಜು ಮೊತ್ತಕ್ಕೆ ಸರ್ಕಾರದಿಂದ ಆಡಳಿತಾತ್ಮಕ ಅನುಮೋದನೆಯನ್ನು ಪಡೆದು ಕೃಷ್ಣಾ ಭಾಗ್ಯ ಜಲ ನಿಗಮದಿಂದ ಕೈಗೆತ್ತಿಕೊಳ್ಳುವುದು.*

2. *ಪ್ರಸ್ತಾಪಿತ ಯೋಜನೆಗೆ ಅವಶ್ಯವಿರುವ 2.00 ಟಿ.ಎಂ.ಸಿ ಪ್ರಮಾಣದ ನೀರಿನ ಹಂಚಿಕೆ ಪಡೆಯುವುದು."*

ಮುಂದುವರೆದು, ವ್ಯವಸ್ಥಾಪಕ ನಿರ್ದೇಶಕರು, ಕೃಷ್ಣಾ ಭಾಗ್ಯ ಜಲ ನಿಗಮ ರವರು ನಿರ್ದೇಶಕರ ಮಂಡಳಿಯ ಶಿಫಾರಸ್ಸಿನಂತೆ, 2019-20ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಘೋಷಿಸಲಾದಂತೆ ಬಾಗಲಕೋಟೆ ಜಿಲ್ಲೆಯ ಬಾದಾಮಿ ಮತ್ತು ಬೀಳಗಿ ಮತಕ್ಷೇತ್ರದಲ್ಲಿನ 16,000 ಹೆಕ್ಟೇರ್ ನೀರಾವರಿ ವಂಚಿತ ಪ್ರದೇಶಕ್ಕೆ ಆಲಮಟ್ಟಿ ಜಲಾಶಯದ ಹಿನ್ನೀರಿನಿಂದ ನೀರನ್ನು ಎತ್ತಿ ನೀರಾವರಿಗೊಳಪಡಿಸುವ ಕೆರೂರ್ ಏತ ನೀರಾವರಿ ಯೋಜನೆಯ ರೂ.525.00 ಕೋಟಿಗಳ ಅಂದಾಜು ಮೊತ್ತದ ವಿವರವಾದ ಯೋಜನಾ ವರದಿಯನ್ನು 2017-18 ನೇ ಸಾಲಿನ ಜಲ ಸಂಪನ್ಮೂಲ ಇಲಾಖೆ, KUWS & DB ಮತ್ತು 2016-17 ನೇ ಸಾಲಿನ ಲೋಕೋಪಯೋಗಿ ಇಲಾಖೆ ಧಾರವಾಡ ವೃತ್ತ ದರಪಟ್ಟಿಗಳು ಹಾಗೂ ಮಾರುಕಟ್ಟೆ ದರಗಳನ್ವಯ ತಯಾರಿಸಿದ್ದು, ಆಡಳಿತಾತ್ಮಕ ಅನುಮೋದನೆ ನೀಡುವಂತೆ ಕೋರಿರುತ್ತಾರೆ.

ಕೃಷ್ಣಾ ಮೇಲ್ದಂಡೆ ಯೋಜನೆಯಡಿ ನೀರಿನ ತೀವ್ರತೆಯನ್ನು (Irrigation Intensity) ಶೇಕಡ 100 ರಂತೆ ಪರಿಗಣಿಸಿ ಹಾಗೂ ಸೂಕ್ಷ್ಮ ನೀರಾವರಿ ಪದ್ಧತಿ ಅಳವಡಿಕೆಯಿಂದಾಗಿ ಒಟ್ಟಾರೆಯಾಗಿ ಹಂಚಿಕೆಯಾದ ನೀರಿನ ಪರಿಮಾಣದಲ್ಲಿಯ ಉಳಿತಾಯದಡಿ ಸದರಿ ಕೆರೂರು ಏತ ನೀರಾವರಿ ಯೋಜನೆಗೆ ಅವಶ್ಯಕವಿರುವ 2.00 ಟಿ.ಎಂ.ಸಿ. ನೀರಿನ ಬಳಕೆಗೆ ವ್ಯವಸ್ಥಾಪಕ ನಿರ್ದೇಶಕರು, ಕೃಷ್ಣಾ ಭಾಗ್ಯ ಜಲ ನಿಗಮ ನಿಯಮಿತ ರವರು ಪರಿಗಣಿಸಿ ಕ್ರಮ ವಹಿಸುವುದು.

ಪ್ರಸ್ತಾವನೆಯಲ್ಲಿನ ಅಂಶಗಳನ್ನು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಗಿನಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ:ಜಸಂಇ 285 ಕೆಬಿಎನ್ 2018, ಬೆಂಗಳೂರು, ದಿನಾಂಕ:06/03/2021**

ಬಾಗಲಕೋಟೆ ಜಿಲ್ಲೆಯ ಬಾದಾಮಿ ಮತ್ತು ಬೀಳಗಿ ಮತಕ್ಷೇತ್ರದ ವ್ಯಾಪ್ತಿಯ 16,000 ಹೆಕ್ಟೇರ್ ನೀರಾವರಿ ವಂಚಿತ ಪ್ರದೇಶಕ್ಕೆ ಆಲಮಟ್ಟಿ ಜಲಾಶಯದ ಹಿನ್ನೀರಿನಿಂದ 2.00 TMC ನೀರನ್ನು ಎತ್ತಿ ನೀರಾವರಿ ಸೌಲಭ್ಯ ಕಲ್ಪಿಸುವ ರೂ.525.00 ಕೋಟಿ ಮೊತ್ತದ ಕೆರೂರ್ ಏತ ನೀರಾವರಿ ಯೋಜನೆಗೆ ಆಡಳಿತಾತ್ಮಕ ಅನುಮೋದನೆ ನೀಡಿ, ಸದರಿ ಯೋಜನೆಯನ್ನು 3 ಹಂತಗಳಲ್ಲಿ ಅಂದರೆ ಮೊದಲನೇ ಹಂತದಲ್ಲಿ ರೂ.310.00 ಕೋಟಿ, 2ನೇ ಹಂತದಲ್ಲಿ ರೂ.110.00 ಕೋಟಿ ಮತ್ತು 3ನೇ ಹಂತದಲ್ಲಿ ರೂ.105.00 ಕೋಟಿ ಮೊತ್ತದಲ್ಲಿ ಕೈಗೆತ್ತಿಕೊಳ್ಳಲು ಹಾಗೂ ಮೊದಲನೇ ಹಂತದ ಕಾಮಗಾರಿಗೆ ಮಾತ್ರ ಟೆಂಡರ್ ಕರೆಯುವ ಷರತ್ತಿನೊಂದಿಗೆ ಅನುಮೋದನೆ ನೀಡಿದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯು ಟಿಪ್ಪಣಿ ಸಂಖ್ಯೆ:ಆಇ 137 ಆಕೋ-1/2021(ಇ-ಆಫೀಸ್) ದಿನಾಂಕ:05/03/2021ರಲ್ಲಿ ನೀಡಿರುವ ಸಹಮತಿ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

6/3/2021
(ರವೀಂದ್ರ ಕೊಂಡ)
ಸರ್ಕಾರದ ಅಧೀನ ಕಾರ್ಯದರ್ಶಿ (ತಾಂತ್ರಿಕ-5)
ಜಲ ಸಂಪನ್ಮೂಲ ಇಲಾಖೆ

ಪ್ರತಿಯನ್ನು:

1. ಮಹಾಲೇಖಪಾಲರು (ಎ & ಇ)/(ಇ & ಆರ್.ಎಸ್.ಎ)/(ಜಿ & ಎಸ್.ಎಸ್.ಎ) ಕರ್ನಾಟಕ, ಬೆಂಗಳೂರು.
2. ಮಾನ್ಯ ಮುಖ್ಯ ಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ.
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು, ಜ. ಸಂ. ಇಲಾಖೆ..
5. ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು, ಜಲ ಸಂಪನ್ಮೂಲ ಇಲಾಖೆ..
6. ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು, ಜ.ಸಂ.ಇಲಾಖೆ, ವಿಕಾಸಸೌಧ,
7. ಸರ್ಕಾರದ ಹೆಚ್ಚುವರಿ ಕಾರ್ಯದರ್ಶಿಗಳು, ಜಲ ಸಂಪನ್ಮೂಲ ಇಲಾಖೆ, ವಿಕಾಸಸೌಧ, ಬೆಂಗಳೂರು
8. ವ್ಯವಸ್ಥಾಪಕ ನಿರ್ದೇಶಕರು, ಕೃಷ್ಣಾ ಭಾಗ್ಯ ಜಲ ನಿಗಮ ನಿಯಮಿತ, ಬೆಂಗಳೂರು
9. ಪ್ರಧಾನ ಇಂಜಿನಿಯರ್/ಮುಖ್ಯ ಇಂಜಿನಿಯರ್ (ಅಂರಾಜ), ಜಲ ಸಂಪನ್ಮೂಲ ಅಭಿವೃದ್ಧಿ ಸಂಸ್ಥೆ, ಬೆಂಗಳೂರು,
10. ಮುಖ್ಯ ಇಂಜಿನಿಯರ್, ಕೃಭಾಜನಿನಿ, ಆಣೆಕಟ್ಟು ವಲಯ, ಆಲಮಟ್ಟಿ.
11. ವಿಶೇಷಾಧಿಕಾರಿಗಳು ಮತ್ತು ಪದನಿಮಿತ್ತ ಜಂಟಿ ಕಾರ್ಯದರ್ಶಿಗಳು (ಲೋಇ-ಆಕೋ) ಆರ್ಥಿಕ ಇಲಾಖೆ, ಬೆಂಗಳೂರು.
12. ಸರ್ಕಾರದ ಉಪ ಕಾರ್ಯದರ್ಶಿ (ಕೃಭಾಜನಿ) ಜಲ ಸಂಪನ್ಮೂಲ ಇಲಾಖೆ.
13. ಉಪ ಕಾರ್ಯದರ್ಶಿಗಳು (ಸಚಿವ ಸಂಪುಟ) ವಿಧಾನ ಸೌಧ, ಬೆಂಗಳೂರು.
14. ತಾಂತ್ರಿಕ ಸಹಾಯಕರು-6, ಜಲ ಸಂಪನ್ಮೂಲ ಇಲಾಖೆ.
15. ಶಾಖಾ ರಕ್ಷಕ ಕಡತ / ಹೆಚ್ಚುವರಿ ಪ್ರತಿಗಳು.